ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಕುರಿತು

ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :-

642 (861) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳ ಸಂಖ್ಯೆ ಎಷ್ಟು ; ಅವುಗಳು ಎಷ್ಟು ಕಿ.ಮೀ. ವ್ಯಾಪ್ತಿಯನ್ನು ಒಳಗೊಂಡಿವೆ ; (ವಿವರ ನೀಡುವುದು)

(ಆ) ಬೆಂಗಳೂರು-ಮೈಸೂರು ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸಿದ್ದು, ರಸ್ತೆ ಅಗಲೀಕರಣ ಕಾಮಗಾರಿಯ ಪ್ರಗತಿಯ ವರದಿ ನೀಡುವುದು ; ಇದಕ್ಕಾಗಿ ಎಷ್ಟು ಅನುದಾನವನ್ನು ಮೀಸಲಿರಿಸಲಾಗಿದೆ ;

(ಇ) ರಾಜ್ಯಾದ್ಯಂತ ಇರುವ ರಾಜ್ಯ ಹೆದ್ದಾರಿಗಳ ಸಂಖ್ಯೆ ಎಷ್ಟು ; ಅವುಗಳು ಎಷ್ಟು ಕಿ.ಮೀ. ಉದ್ದವನ್ನು ಹೊಂದಿವೆ ; (ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಪ್ರಮುಖವಾಗಿ ಎಷ್ಟು ಜಿಲ್ಲಾ ರಸ್ತೆಗಳಿವೆ ; ಅವುಗಳಲ್ಲಿ ರಾಜ್ಯ ಹೆದ್ದಾರಿಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು?